# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಮಾನ್ಯ ಸದಸ್ಯರ ಹೆಸರು | : | ಶ್ರೀ ವಿಜಯ ಸಿಂಗ್(ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **342** |
| ಉತ್ತರಿಸಬೇಕಾದ ದಿನಾಂಕ | : | 23.09.2020 |
| ಉತ್ತರಿಸಬೇಕಾದ ಸಚಿವರು | : | ವಸತಿ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆಗೆ ವಸತಿ ಇಲಾಖೆಯಿಂದ ಎಷ್ಟು ಮನೆಗಳನ್ನು ಮಂಜೂರು ಮಾಡಲಾಗಿದೆ: ಮಂಜೂರು ಮಾಡಲಾದ ಮನೆಗಳನ್ನು ಫಲಾನುಭವಿಗಳಿಗೆ ವಿತರಿಸಲಾಗಿದೆಯೇ: (ತಾಲ್ಲೂಕುವಾರು ಮಾಹಿತಿ ನೀಡುವುದು) | 2018-19, 2019-20 ಮತ್ತು 2020-21 ನೇ ಸಾಲಿನಲ್ಲಿ ವಿವಿಧ ವಸತಿ ಯೋಜನೆಗಳಡಿ ಬೀದರ್ ಜಿಲ್ಲೆಗೆ ಗ್ರಾಮೀಣ ಪ್ರದೇಶದಲ್ಲಿ ಮಂಜೂರು ಮಾಡಲಾದ 1001 ಮನೆಗಳ ಗುರಿಯಲ್ಲಿ 47 ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದ್ದು, ಉಳಿದಂತೆ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ. ತಾಲ್ಲೂಕು ವಿವರ ಅನುಬಂಧ 1 ರಲ್ಲಿ ಒದಗಿಸಲಾಗಿದೆ.<br><br>ಪ್ರಧಾನ ಮಂತ್ರಿ ಅವಾಸ್ ಯೋಜನೆ (ನಗರ )ಯಡಿ ಬೀದರ್ ನಗರಸಭೆ ವ್ಯಾಪ್ತಿಯಲ್ಲಿ ಜಿ+3 ಮಾದರಿಯ 4000 ಹಾಗೂ ಬಸವ ಕಲ್ಯಾಣ ನಗರಸಭೆ ವ್ಯಾಪ್ತಿಯಲ್ಲಿ ಜಿ+3 ಮಾದರಿಯ 2400 ಮನೆಗಳಿಗೆ ಸರ್ಕಾರದಿಂದ ಮಂಜೂರಾತಿಯಾಗಿದ್ದು ಫಲಾನುಭವಿಗಳ ಆಯ್ಕೆಗೆ ನಗರ ಆಶ್ರಯ ಸಮಿತಿ ಸಭೆಯಲ್ಲಿ ಮಂಡಿಸಲು ಬಾಕಿ ಇರುತ್ತದೆ. |
| (ಆ) | 2018-19, 2019-20ನೇ ಸಾಲಿನಲ್ಲಿ ಮಂಜೂರಾದ ಮನೆಗಳ ಫಲಾನುಭವಿಗಳಿಗೆ ಈವರೆಗೆ ಹಕ್ಕುಪತ್ರ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ : ಅಧಿಕಾರಿಗಳ ನಿರ್ಲಕ್ಷ್ಯದಿಂದ ಮಂಜೂರಾದ ಮನೆಗಳಿಗೆ ಹಕ್ಕುಪತ್ರ ನೀಡಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಸ್ವಂತ ನಿವೇಶನ ಹೊಂದಿರುವ ಅರ್ಹ ವಸತಿರಹಿತರನ್ನು ಮಾತ್ರ ವಸತಿ ಯೋಜನೆಗಳಡಿ ಪರಿಗಣಿಸಿ ವಸತಿ ಸೌಕರ್ಯ ಕಲ್ಪಿಸಲಾಗುತ್ತಿದೆ.<br><br>2018-19 ಮತ್ತು 2019-20 ನೇ ಸಾಲಿನಲ್ಲಿ ಬೀದರ್ ಜಿಲ್ಲೆಯಿಂದ ಹಕ್ಕುಪತ್ರ ಕೋರಿ ಯಾವುದೇ ಪ್ರಸ್ತಾವನೆ ನಿಗಮದಲ್ಲಿ ಸ್ವೀಕೃತವಾಗಿರುವುದಿಲ್ಲ. ಬೀದರ್ ಜಿಲ್ಲೆಯ ಗ್ರಾಮೀಣ ಪ್ರದೇಶದಲ್ಲಿ ನಿವೇಶನ ಹಂಚಿಕೆಗೆ ಒಟ್ಟು 159.25 ಎಕರೆ ಸರ್ಕಾರಿ ಜಮೀನನ್ನು ಮಂಜೂರು ಮಾಡಲಾಗಿದೆ. ನಗರ ಪ್ರದೇಶದಲ್ಲಿ ನಿವೇಶನ ಹಂಚಿಕೆ ಮಾಡಲು ಮಂಜೂರಾದ ಸರ್ಕಾರಿ/ಖರೀದಿಸಲಾದ ಖಾಸಗಿ ಜಮೀನು ಒಟ್ಟು 78.34 ಎಕರೆ ಲಭ್ಯವಿರುತ್ತದೆ. ಹೀಗೆ ಮಂಜೂರಾದ/ಖರೀದಿಸಲಾದ ಜಮೀನಿನ ಹದ್ದುಬಸ್ತು ಮತ್ತು ಜಮೀನಿನ ಅಭಿವೃದ್ಧಿ ಕಾರ್ಯ ಪ್ರಗತಿಯಲ್ಲಿದ್ದು ಗ್ರಾಮಸಭೆ/ನಗರ ಆಶ್ರಯ ಸಮಿತಿ ಮೂಲಕ ಫಲಾನುಭವಿಗಳ ಆಯ್ಕೆ ಪ್ರಕ್ರಿಯೆ ಪ್ರಗತಿಯಲ್ಲಿರುತ್ತದೆ.<br><br>ಕಳೆದ ಎರಡು ವರ್ಷಗಳಿಂದ ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಹಕ್ಕು ಪತ್ರಗಳನ್ನು ಹಂಚಿಕೆ ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಪ್ರಸ್ತುತ ಲಭ್ಯವಿರುವ ಜಮೀನನ್ನು ಬಳಸಿಕೊಂಡು ಅರ್ಹ ನಿವೇಶನ ರಹಿತರಿಗೆ ನಿವೇಶನ ಹಂಚಿಕೆ ಮಾಡುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ.<br><br>ಮೇಲ್ಕಂಡ ಪ್ರಕ್ರಿಯೆ ಪೂರ್ಣಗೊಂಡ ನಂತರ ಹಕ್ಕುಪತ್ರ ಹಂಚಿಕೆಗೆ ಕ್ರಮ ವಹಿಸಲಾಗುವುದು. |
| (ಇ) | ಈವರೆಗೆ ಎಷ್ಟು ಫಲಾನುಭವಿಗಳಿಗೆ ಹಕ್ಕುಪತ್ರಗಳನ್ನು ನೀಡಲಾಗಿದೆ: ಮನೆಗಳ ಹಕ್ಕುಪತ್ರಗಳನ್ನು ನೀಡದೇ ಇರಲು ಕಾರಣಗಳೇನು? (ತಾಲ್ಲೂಕುವಾರು ವಿವರ ನೀಡುವುದು) | |

ಸಂಖ್ಯೆ :ವಇ 274 ಹೆಚ್‌ಎಎಂ 2020

(ವಿ. ಸೋಮಣ್ಣ)
ವಸತಿ ಸಚಿವರು

# ರಾಜೀವ್ ಗಾಂಧಿ ವಸತಿ ನಿಗಮ

ಅನುಬಂಧ 1

| District | Taluk | Scheme | Target | Selection |
|---|---|---|---|---|
| Bidar | Aurad | PMAY (G) | 85 | 8 |
| Bidar | Aurad | Devaraj Urasu | 64 | 0 |
| Bidar | Basavakalyana | PMAY (G) | 37 | 8 |
| Bidar | Basavakalyana | Devaraj Urasu | 206 | 0 |
| Bidar | Bhalki | PMAY (G) | 229 | 18 |
| Bidar | Bhalki | Devaraj Urasu | 55 | 0 |
| Bidar | Bidar | PMAY (G) | 59 | 0 |
| Bidar | Bidar | Devaraj Urasu | 113 | 2 |
| Bidar | Humnabad | PMAY (G) | 93 | 8 |
| Bidar | Humnabad | Devaraj Urasu | 60 | 3 |
| **Bidar Total** | | | **1001** | **47** |